**All India Radio: Bangalore**
**Regional Bulletin In Kannada**
**14.01.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.01.2026 / 2.30 p.m.**
**<><><><>**

ಮುಖ್ಯಾಂಶಗಳು

1. ಬೆಂಗಳೂರು ನಗರ ಜಿಲ್ಲಾ ಯೋಜನಾ ಸಮಿತಿಗೆ ಮೂರು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯ ವೇಳಾಪಟ್ಟಿ ಪ್ರಕಟ
2. ಕರ್ನಾಟಕ ಕಾರಾಗೃಹ ಸುಧಾರಣೆ : ಉನ್ನತ ಮಟ್ಟದ ಸಮಿತಿಯಿಂದ ಗೃಹ ಸಚಿವರಿಗೆ ವರದಿ ಸಲ್ಲಿಕೆ
3. ಮಂಗಳೂರಿನಲ್ಲಿ ಇದೇ ೧೭, ೧೮ ರಂದು ಒಂಬತ್ತನೇ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವ
4. ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಗಣರಾಜ್ಯೋತ್ಸವ ದಿನಾಚರಣೆ: ಸಾರ್ವಜನಿಕರಿಗೆ ಇ-ಪಾಸ್ ವ್ಯವಸ್ಥೆ

<><><><>

ಬೆಂಗಳೂರು ನಗರ ಜಿಲ್ಲಾ ಯೋಜನಾ ಸಮಿತಿಗೆ ಒಟ್ಟು ಮೂರು ನಗರ ಸ್ಥಳೀಯ ಸಂಸ್ಥೆಗಳಾದ ಹೆಬ್ಬಗೋಡಿ ನಗರಸಭೆ, ಜಿಗಣಿ ನಗರಸಭೆ ಮತ್ತು ಚಂದಾಪುರ ಪುರಸಭೆ ಮತಕ್ಷೇತ್ರದ ಚುನಾವಣೆ ನಡೆಯಲಿದ್ದು, ಈ ಸಂಬಂಧ ರಾಜ್ಯ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದೆ. ಇದೇ ೨೨ ರವರೆಗೆ ಬೆಳಗ್ಗೆ ೧೦ ರಿಂದ ಮಧ್ಯಾಹ್ನ ೩ ಗಂಟೆಯವರೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಾಮಪತ್ರಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಇದೇ ೨೩ ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಇದೇ ೨೭ ರಂದು ನಾಮಪತ್ರಗಳನ್ನು ಹಿಂಪಡೆಯಲು ಕೊನೆಯ ದಿನವಾಗಿರುತ್ತದೆ. ಮತದಾನ ಅಗತ್ಯವಾದಲ್ಲಿ ಫೆಬ್ರವರಿ ೪ ರಂದು ಬೆಳಗ್ಗೆ ೯ ರಿಂದ ಮಧ್ಯಾಹ್ನ ೩ ರವರೆಗೆ ನಡೆಯಲಿದೆ. ಅಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಂಜೆ ೪ ರಿಂದ ಮತಗಳ ಎಣಿಕೆ ಕಾರ್ಯ ನಡೆಯಲಿದೆ. ಫೆಬ್ರವರಿ ೫ ರಂದು ಚುನಾವಣೆ ಪೂರ್ಣಗೊಳ್ಳಲಿದೆ ಎಂದು ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ನ ಚುನಾವಣಾ ಅಧಿಕಾರಿಗಳು ತಿಳಿಸಿದ್ದಾರೆ.

<><><>

ಕರ್ನಾಟಕ ಕಾರಾಗೃಹ ಸುಧಾರಣೆಗಳ ಕುರಿತಂತೆ ಕಾನೂನು-ಸುವ್ಯವಸ್ಥೆ ಎಡಿಜಿಪಿ ಆರ್.ಹಿತೇಂದ್ರ ನೇತೃತ್ವದ ಉನ್ನತ ಮಟ್ಟದ ಸಮಿತಿಯು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಅವರಿಗೆ ಇಂದು ವರದಿ ಸಲ್ಲಿಸಿತು. ರಾಜ್ಯದ ಕಾರಾಗೃಹಗಳಲ್ಲಿ ಕಾನೂನುಬಾಹಿರ ಚಟುವಟಿಕೆಗಳು, ಭದ್ರತಾ ಕ್ರಮಗಳು ಮತ್ತು ಕಾರಾಗೃಹ ಸುಧಾರಣಾ ಕ್ರಮಗಳ ಕುರಿತಂತೆ ಸಮಿತಿಯು ಸಲ್ಲಿಸಿರುವ ಶಿಫಾರಸ್ಸುಗಳ ಕುರಿತು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ, ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಈ ವೇಳೆ ಸಮಿತಿಯ ಮುಖ್ಯಸ್ಥರಾದ ಕಾನೂನು ಸುವಸ್ಥೆ ಎಡಿಜಿಪಿ ಆರ್.ಹಿತೇಂದ್ರ, ಐಜಿಪಿ ಸಂದೀಪ್ ಪಾಟೀಲ್, ಪೊಲೀಸ್ ವರಿಷ್ಠಾಧಿಕಾರಿಗಳಾದ ಸಿ.ಬಿ.ರಿಷ್ಯಂತ್, ಅಮರನಾಥ್ ರೆಡ್ಡಿ ಇದ್ದರು.

<><><>

ಪಕ್ಷದ ನಾಯಕರ ಜತೆಗಿನ ಮಾತುಕತೆ ಬಗ್ಗೆ ಬಹಿರಂಗವಾಗಿ ಚರ್ಚೆ ಮಾಡುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ವಿಧಾನಸೌಧದ ಆವರಣದಲ್ಲಿ ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು,  ತಾವು ಕೆಪಿಸಿಸಿ ಅಧ್ಯಕ್ಷರಾಗಿರುವುದರಿಂದ ಶಿಷ್ಟಾಚಾರದ ಪ್ರಕಾರ ರಾಹುಲ್ ಗಾಂಧಿ ಅವರನ್ನು ಸ್ವಾಗತಿಸಿದ್ದೇನೆ. ನರೇಗಾ ವಿಚಾರವಾಗಿ ರಾಜ್ಯ ಕಾಂಗ್ರೆಸ್ ಮಾಡುತ್ತಿರುವ ಕಾರ್ಯಕ್ರಮಗಳ ಬಗ್ಗೆ ಅವರಿಗೆ ತಿಳಿಸಿದ್ದೇನೆ. ಅಲ್ಲದೇ ರಾಜ್ಯ ಬಿಜೆಪಿಯಲ್ಲಿ ಆಗುತ್ತಿರುವ ರಾಜಕಾರಣದ ಕುರಿತು ಚರ್ಚೆ ಮಾಡಿದ್ದೇವೆ ಎಂದು ತಿಳಿಸಿದರು.

<><><>

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ, ನರೇಗಾ ಯೋಜನೆಯ ಹೆಸರಷ್ಟೇ ಬದಲು ಮಾಡಿಲ್ಲ. ಜೊತೆಗೆ ಈ ಯೋಜನೆಯಡಿ ರಾಜ್ಯಕ್ಕೆ ನೀಡುತ್ತಿದ್ದ ಅನುದಾನದಲ್ಲಿ ಶೇಕಡ ೪೦ ರಷ್ಟು ಕಡಿತ ಮಾಡಿದೆ ಎಂದು ವಸತಿ ಸಚಿವ ಜಮೀರ್ ಅಹಮ್ಮದ್ ಆರೋಪಿಸಿದ್ದಾರೆ. ಬಳ್ಳಾರಿ ನಗರದಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ನರೇಗಾ ಯೋಜನೆಯ ಮಾರ್ಪಾಡಿನೊಂದಿಗೆ ಕೇಂದ್ರ-ರಾಜ್ಯಗಳ ನಡುವಿನ ಅಧಿಕಾರ ಹಾಗೂ ತೆರಿಗೆ ಹಂಚಿಕೆ ಕುರಿತ ಸಂವಿಧಾನ ವಿಧಿ ೨೫೮ ಮತ್ತು ೨೮೦ ರ ಸ್ಪಷ್ಟ ಉಲ್ಲಂಘನೆಯಾಗಿದೆ. ಈ ಹಿನ್ನೆಲೆಯಲ್ಲಿ ನರೇಗಾ ಯೋಜನೆ ಪುನರ್ ಸ್ಥಾಪಿಸಬೇಕು ಎಂದು ಆಗ್ರಹಿಸಿದರು. ಇನ್ನೊಂದೆಡೆ, ರಾಜ್ಯದಲ್ಲಿ ಕಳೆದ ವರ್ಷ ೩೬ ಸಾವಿರದ ೭೦೦ ಮನೆಗಳನ್ನು ವಿತರಿಸಲಾಗಿದೆ. ಇದೇ ೨೪ ರಂದು ಧಾರವಾಡದ ೧

ಸಾವಿರದ ೬೦೦, ಬಳ್ಳಾರಿ ಜಿಲ್ಲೆ ೮೦೦, ವಿಜಯನಗರ ಒಂದು ಸಾವಿರ ಸೇರಿದಂತೆ ಈ ವರ್ಷ ರಾಜ್ಯದಲ್ಲಿ ನಿರ್ಮಾಣವಾಗಿರುವ ೪೨ ಸಾವಿರದ ೩೦೦ ಮನೆಗಳನ್ನು ಫಲಾನುಭವಿಗಳಿಗೆ ವಿತರಿಸಲಾಗುವುದು ಎಂದು ಸಚಿವ ಜಮೀರ್ ಅಹಮ್ಮದ್ ತಿಳಿಸಿದರು.

<><><><>

ಕಡಲ ನಗರಿ ಮಂಗಳೂರು ೯ನೇ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವಕ್ಕೆ ಸಜ್ಜಾಗುತ್ತಿದೆ. ಇದೇ ೧೭ ಮತ್ತು ೧೮ರಂದು ತಣ್ಣೀರುಬಾವಿ ಕಡಲ ತೀರದಲ್ಲಿ ಗಾಳಿಪಟ ಉತ್ಸವ ನಡೆಯಲಿದ್ದು, ೧೪ ಅಂತಾರಾಷ್ಟ್ರೀಯ ಗಾಳಿಪಟ ತಂಡಗಳು, ೮ ರಾಷ್ಟ್ರೀಯ ತಂಡಗಳು ಭಾಗವಹಿಸಲಿವೆ. ಗಾಳಿಪಟ ಉತ್ಸವದ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಟೀಮ್ ಮಂಗಳೂರು ಗಾಳಿಪಟ ತಂಡದ ರೂವಾರಿ, ಕಲಾವಿದ ದಿನೇಶ್ ಹೊಳ್ಳ, ಇತರ ದೇಶಗಳೊಡನೆ ಬಾಂಧವ್ಯ ವೃದ್ಧಿಸುವಲ್ಲಿ ಈ ಗಾಳಿಪಟ ಉತ್ಸವ ಸಹಕಾರಿಯಾಗಲಿದೆ. ನಮ್ಮ ಪರಂಪರೆ ಬಿಂಬಿಸುವ ಗಾಳಿಪಟವನ್ನು ಹಾರಿಸಲಾಗುವುದು. ಈಗಾಗಲೇ ಸಕಲ ಸಿದ್ಧತೆ ಮಾಡಲಾಗಿದೆ. ಬಾನಾಡಿಯಲ್ಲಿ ಹಾರಾಡುವ ಈ ಬಣ್ಣಗಳ ಹಬ್ಬದಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು ಎಂದು ಕೋರಿದರು.

<><><><>

ಬೆಂಗಳೂರು ನಗರದ ಫೀಲ್ಡ್ ಮಾರ್ಷಲ್ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಇದೇ ೨೬ ರಂದು ನಡೆಯಲಿರುವ ರಾಜ್ಯ ಮಟ್ಟದ ೭೭ನೇ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ವೀಕ್ಷಿಸಲು ಸಾರ್ವಜನಿಕರಿಗೆ ಇ-ಪಾಸ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ ತಿಳಿಸಿದ್ದಾರೆ. ಆಸಕ್ತರು ಸೇವಾ ಸಿಂಧು ವೆಬ್‌ಸೈಟ್ www.sevasindhu.karnataka.gov.in ನಲ್ಲಿ ಇಂದಿನಿಂದ ಇದೇ ೨೪ ರ ಸಂಜೆ ೫ ಗಂಟೆಯೊಳಗೆ ಅಗತ್ಯವಿರುವ ಎಲ್ಲ ವೈಯಕ್ತಿಕ ವಿವರಗಳನ್ನು ನಮೂದಿಸಿ, ಇ-ಪಾಸ್‌ಗಳನ್ನು ಪಡೆಯಬಹುದು. ಇ-ಪಾಸ್‌ಗಳನ್ನು ಹೊಂದಿರುವವರು ಪರೇಡ್ ಮೈದಾನದ ಪ್ರವೇಶ ದ್ವಾರ ಸಂಖ್ಯೆ ೦೫ ರಲ್ಲಿ ಪರಿಶೀಲನೆಗಾಗಿ ಇ-ಪಾಸ್‌ನ ಮುದ್ರಿತ ಪ್ರತಿಯನ್ನು ಅಥವಾ ಡಿಜಿಟಲ್ ಪ್ರತಿಯನ್ನು ಕಡ್ಡಾಯವಾಗಿ ಹೊಂದಿರಬೇಕು ಎಂದು ಅವರು ವಿವರಿಸಿದರು. ಇ-ಪಾಸ್ ನೋಂದಣಿ ಪ್ರಕ್ರಿಯೆ ಕುರಿತು ಸಹಾಯಕ್ಕಾಗಿ ಸೇವಾ ಸಿಂಧು ವೈಬ್‌ಸೈಟ್‌ನಲ್ಲಿ ಸಹಾಯ ವಿಭಾಗವನ್ನು ವೀಕ್ಷಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

<><><><>

ಗಡಿ ಭದ್ರತಾ ಪಡೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಸಮಯದಲ್ಲಿ ಹೃದಯಾಘಾತದಿಂದ ಮೃತಪಟ್ಟ ಮಂಡ್ಯ ನಗರದ ತಾವರೆಗೆರೆ ನಿವಾಸಿ, ಯೋಧ ಎಂ.ಬಿ.ಮಾದೇಗೌಡ ಅವರಿಗೆ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತಿಮ ನಮನ ಸಲ್ಲಿಸಲಾಯಿತು. ಮಹಾರಾಷ್ಟ್ರ ರಾಜ್ಯದ ಚಾಕೋರು ಜಿಲ್ಲೆಯ ಲಾತೂರ್ ನ ಬಿಎಸ್‌ಎಫ್ ತರಬೇತಿ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವರು, ಕಳೆದ ೧೫ ವರ್ಷಗಳಲ್ಲಿ ದೇಶದ ಹಲವೆಡೆ ಸೇವೆ ಸಲ್ಲಿಸಿದ್ದರು.

<><><>

ರೈತರು ನೇರವಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಕಚೇರಿಗೆ ಬಂದು ನೋಂದಣಿ ಮಾಡಿಕೊಳ್ಳಬೇಕು. ರೈತರಿಂದ ಮೆಕ್ಕೆಜೋಳ ಖರೀದಿ ಪಾರದರ್ಶಕವಾಗಿರಲಿ. ದಲ್ಲಾಳಿ ಅಥವಾ ಮಧ್ಯವರ್ತಿಗಳಿಗೆ ಅವಕಾಶವಿಲ್ಲ. ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯ ಲಾಭ ರೈತರಿಗೆ ಸಿಗುವಂತೆ ಅಧಿಕಾರಿಗಳು ನಿಗಾವಹಿಸಬೇಕೆಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಸೂಚಿಸಿದ್ದಾರೆ.

**ಧ್ವನಿ: ದಿವ್ಯಪ್ರಭು (೩೧ ಸೆಕೆಂಡ್‌ಗಳು)**

<><><>

ಕರ್ನಾಟಕ ಮತ್ತು ಕೇರಳ ಉಪ ವಿಭಾಗದ ಆಶ್ರಯದಲ್ಲಿ, ನಿವೃತ್ತ ಸೈನಿಕರ ವಂತಿಗೆ ಆರೋಗ್ಯ ಯೋಜನೆ ಪಾಲಿಕ್ಲಿನಿಕ್, ಎಂಇಜಿ ಕೇಂದ್ರವನ್ನು 'ಇಸಿಎಚ್ ಎಸ್‌ಪಿಸಿಬಿಆರ್‌ವಿ' ಎಂದು ಮರುನಾಮಕರಣ ಮಾಡಲಾಗಿದೆ. ಜೊತೆಗೆ ಇದನ್ನು ಬೆಂಗಳೂರಿನ ಕಬ್ಬನ್ ರಸ್ತೆಯಲ್ಲಿರುವ ಇಂಟಿಗ್ರೇಟೆಡ್ ಆರ್ಮಿ ವೆಟರನ್ಸ್ ಕಾಂಪ್ಲೆಕ್ಸ್‌ನಲ್ಲಿರುವ ಬಿಆರ್‌ವಿ ಆವರಣಕ್ಕೆ ಸ್ಥಳಾಂತರ ಮಾಡಲಾಗಿದೆ. ಪಾಲಿಕ್ಲಿನಿಕ್ ಅನ್ನು ಕರ್ನಾಟಕ ಮತ್ತು ಕೇರಳ ಉಪ ವಿಭಾಗದ ಜನರಲ್ ಆಫೀಸರ್ ಕಮಾಂಡಿಂಗ್, ಮೇಜರ್ ಜನರಲ್ ವಿ.ಟಿ.ಮ್ಯಾಥ್ಯೂ ಮತ್ತು ಬೆಂಗಳೂರು ಮಿಲಿಟರಿ ಕೇಂದ್ರದ ಹಿರಿಯ ಯೋಧರು ಉದ್ಘಾಟಿಸಿದರು. ಈ ಪಾಲಿಕ್ಲಿನಿಕ್, ಆಧುನಿಕ ವೈದ್ಯಕೀಯ ಸೌಲಭ್ಯಗಳು ಹಾಗೂ ಅನುಭವಿ ಆರೋಗ್ಯ ವೃತ್ತಿಪರ ಸಿಬ್ಬಂದಿಯನ್ನು ಹೊಂದಿದೆ. ಸಶಸ್ತ್ರ ಪಡೆಗಳ ೨ ಸಾವಿರಕ್ಕೂ ಅಧಿಕ ಹಿರಿಯ ಯೋಧರಿಗೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುವ ಗುರಿಯನ್ನು ಪಾಲಿಕ್ಲಿನಿಕ್ ಹೊಂದಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>